ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ/05/ಇಸಿಎಸ್/01/2012

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-1
ದಿನಾಂಕ:08-04-2013

ಸುತ್ತೋಲೆ

ವಿಷಯ:2013 ರ ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಗೆ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು/ಪ್ರಿನ್ಸಿಪಾಲರು ಅನುಸರಿಸಬೇಕಾದ ಕ್ರಮಗಳ ಕುರಿತು.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2013 ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಯು ದಿ:29-04-2013 ರಂದು ಆರಂಭವಾಗುತ್ತಿದ್ದು, ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಎಲ್ಲ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳು/ಮುಖ್ಯ ಅಧಿಕ್ಷಕರುಗಳು ಈ ಕೆಳಕಂಡ ಕ್ರಮಗಳನ್ನು ಅನುಸರಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

1. 2013ರ ಮೇ ಕರ್ನಾಟಕ ವಿಧಾನಸಭಾ ಚುನಾವಣೆಗೆ ಯಾವುದೇ ಪಾಲಿಟೆಕ್ನಿಕ್ ಅನ್ನು ತೆಗೆದುಕೊಂಡಿದ್ದಲ್ಲಿ, ಹತ್ತಿರದ ಇತರೇ ವಿದ್ಯಾಸಂಸ್ಥೆಗಳ ಕಟ್ಟಡವನ್ನು ಪಡೆದು 2013 ರ ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಯನ್ನು ನಡೆಸಲು ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

2. 2013 ರ ಮೇ ಕರ್ನಾಟಕ ವಿಧಾನಸಭಾ ಚುನಾವಣೆಗೆ ಪಾಲಿಟೆಕ್ನಿಕ್‌ಗಳಿಂದ ಯಾವುದೇ ಸಿಬ್ಬಂದಿ ನಿಯೋಜಿಸಿ, ಸಿಬ್ಬಂದಿಯ ಕೊರತೆಯುಂಟಾದ್ದಲ್ಲಿ ಹತ್ತಿರದ ಶಿಕ್ಷಣ ಸಂಸ್ಥೆಗಳಾದ ಹೈಸ್ಕೂಲ್ ಹಾಗೂ ಪಿ.ಯು ಕಾಲೇಜು ಅಥವಾ ಇತರ ಶಿಕ್ಷಣ ಸಂಸ್ಥೆಗಳಿಂದ ಅರ್ಹ ಉಪನ್ಯಾಕರನ್ನು/ ಸಿಬ್ಬಂದಿ ವರ್ಗದವರ ಸೇವೆಯನ್ನು ಪಡೆದು ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ತಿಳಿಸಲಾಗಿದೆ.

3. ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರದ ಪ್ರಿನ್ಸಿಪಾಲರುಗಳು/ಮುಖ್ಯ ಅಧೀಕ್ಷಕರುಗಳು ಪರೀಕ್ಷಾ ಸಮಯದಲ್ಲಿ ಕೇಂದ್ರಸ್ಥಾನದಲ್ಲಿದ್ದು ಕಾರ್ಯ ನಿರ್ವಹಿಸತಕ್ಕದ್ದು. ಒಂದು ವೇಳೆ ಕೇಂದ್ರ ಸ್ಥಾನ ಬಿಡಬೇಕಾದ ಸಂದರ್ಭದಲ್ಲಿ ಮಾನ್ಯ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪೂರ್ವಾನುಮತಿ ಪಡೆಯುವುದು ಅಗತ್ಯವಾಗಿರುತ್ತದೆ.

4. 2013ರ ಏಪ್ರಿಲ್/ಮೇ ಸೆಮಿಸ್ಟರ್ ಪರೀಕ್ಷೆಯ ಸಮಯದಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು/ಪ್ರಿನ್ಸಿಪಾಲರುಗಳು ಯಾವುದೇ ಕಾರಣಕ್ಕೂ ರಜೆಯನ್ನು ಪಡೆಯಬಾರದು ಹಾಗೂ ಸಿಬ್ಬಂದಿ ವರ್ಗದವರು ಸಹ ರಜೆ ಪಡೆಯದಂತೆ ಕ್ರಮ ಕೈಗೊಳ್ಳುವುದು.

ಕಾರ್ಯದರ್ಶಿ

ಪ್ರತಿ:

1.ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.

2.ಇ-ಆಡಳಿತ 3.ಗಣಕ ವಿಭಾಗಕ್ಕೆ 4.ಕಡತಕ್ಕೆ